ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ಯವರ ನ್ಯಾಯಾಲಯ, ಕುಂದಾಪುರ

ಸಿ.ಸಿ. ನಂಬ್ರ:2119/2018

ಚಾಸಾ:5 ಪ್ರಾಸಾ:5

ದಿನಾಂಕ: 20.08.2024

| | | |
|---|---|---|
| ವಾಗ್ಮೂಲದವರ ಹೆಸರು | : | ಶ್ರೀ ರಾಘವೇಂದ್ರ |
| ತಂದೆಯ ಹೆಸರು | : | ನರಸಿಂಹ |
| ವಯಸ್ಸು | : | 44 ವರ್ಷ |
| ಉದ್ಯೋಗ | : | ಚಾಲಕ |
| ವಾಸ ಸ್ಥಳ | : | ನೆಲ್ಲಿಕಟ್ಟೆ |

ಸಾಕ್ಷಿಯನ್ನು ಪ್ರಮಾಣೀಕರಿಸಲಾಯಿತು.

**ಮುಖ್ಯ ವಿಚಾರಣೆ: ಮಾನ್ಯ ಸ.ಸ.ಅ.ರವರಿಂದ:**

ಆರೋಪಿಯ ಪರಿಚಯವಿಲ್ಲ. ನಮ್ಮ ಮನೆಯ ನೆಲ್ಲಿಕಟ್ಟೆ ಹತ್ತಿರ ದುರ್ಗಾಂಬ ಬಸ್ಸು ಮತ್ತು ಕಾರಿನ ನಡುವೆ ಅಪಘಾತವಾಗಿರುತ್ತದೆ. ಬಸ್ಸಿನಲ್ಲಿ ಇದ್ದ ಮಕ್ಕಳಿಗೆ ಪೆಟ್ಟಾಗಿರುತ್ತದೆ. ಅದರಿಂದ ಒಬ್ಬರು ಮೃತಪಟ್ಟ ಬಗ್ಗೆ ತಿಳಿದುಬಂದಿರುತ್ತದೆ. ಯಾರ ತಪ್ಪಿನಿಂದ ಅಪಘಾತವಾಗಿದೆ ಎಂದು ನನಗೆ ಹೇಳಲಾಗುವುದಿಲ್ಲ. ನಾನು ಪೊಲೀಸರಿಗೆ ಯಾವುದೇ ಹೇಳಿಕೆ ನೀಡಿಲ್ಲ.

**(ಈ ಹಂತದಲ್ಲಿ ಸಾಕ್ಷಿಯು ಅಭಿಯೋಜನೆಗೆ ವಿರುದ್ಧವಾಗಿ ಸಾಕ್ಷಿ ನುಡಿದಿದ್ದರಿಂದ ಮಾನ್ಯ ಸ.ಸ.ಅ.ರವರು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ವಾಟೀ ಸವಾಲಿಗೆ ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು.)**

**ವಾಟೀ ಸವಾಲು: ಮಾನ್ಯ ಸ.ಸ.ಅ.ರವರಿಂದ:**

ಸಾಕ್ಷಿಗೆ ದಿ: 16-07-2018ರ ಹೇಳಿಕೆಯನ್ನು ಓದಿ ಹೇಳಿದ್ದು, ಅದನ್ನು ಆತ ಒಪ್ಪಿ ರುವುದಿಲ್ಲ. ಸಾಕ್ಷಿ ಹೇಳಿಕೆಯನ್ನು ನಿಪಿ-9 ಎಂದು ಗುರುತಿಸಲಾಯಿತು. ನಾನು ಅಪಘಾತದ

ಪ್ರತ್ಯಕ್ಷನಾಗಿದ್ದು ಆರೋಪಿ ನನ್ನ ಸ್ನೇಹಿತನಾದ ಕಾರಣ ಆತನಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿತರ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ನುಡಿದಿರುತ್ತಾರೆ.**

**ಮರು ವಿಚಾರಣೆಃ** ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓದಿ ಹೇಳಿ ಕೇಳಿ ಸರಿ ಇದೆ

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**
**ಪ್ರ. ದ. ನ್ಯಾ. ದಂ. ಕುಂದಾಪುರ**